All India Radio: Bangalore
National Bulletin In Kannada
05.04.2024:07.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

05.04.2024:07.35AM

******

ಮುಖ್ಯಾಂಶಗಳು:

1. ಹನ್ನೊಂದು ರಾಜ್ಯಗಳ ನಗರ ಪಾಲಿಕೆ ಆಯುಕ್ತರು ಹಾಗೂ ಆಯ್ದ ಜಿಲ್ಲಾ ಚುನಾವಣಾ ಅಧಿಕಾರಿಗಳೊಂದಿಗೆ ಚುನಾವಣಾ ಆಯೋಗ ಇಂದು ಸಮಾವೇಶ
2. ಲೋಕಸಭಾ ಚುನಾವಣೆಯ ಎರಡನೇ ಹಂತಕ್ಕೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಂತ್ಯ
3. ಪಕ್ಷದ ಪ್ರಣಾಳಿಕೆ ಅಂತಿಮಗೊಳಿಸುವ ಕುರಿತು ಬಿಜೆಪಿ ಚುನಾವಣಾ ಪ್ರಣಾಳಿಕೆ ಸಮಿತಿ ಚರ್ಚೆ; ಕಾಂಗ್ರೆಸ್ ನಿಂದ ಇಂದು ಪ್ರಣಾಳಿಕೆ ಬಿಡುಗಡೆ
4. ಕೇಂದ್ರದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಪಶ್ಚಿಮ ಬಂಗಾಳ ಸರ್ಕಾರ ವಿಫಲ: ಪ್ರಧಾನಿ ನರೇಂದ್ರ ಮೋದಿ ಆರೋಪ
5. ಐಪಿಎಲ್ ಕ್ರಿಕೆಟ್ : ಗುಜರಾತ್ ಟೈಟನ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡಕ್ಕೆ ೩ ವಿಕೆಟ್ ಜಯ

*****

ಕಳೆದ ಲೋಕಸಭಾ ಚುನಾವಣೆಯಲ್ಲಿ ಕಡಿಮೆ ಮತದಾನವಾಗಿರುವ ೧೧ ರಾಜ್ಯಗಳ ನಗರ ಪಾಲಿಕೆ ಆಯುಕ್ತರು ಮತ್ತು ಆಯ್ದ ಜಿಲ್ಲಾ ಚುನಾವಣಾ ಅಧಿಕಾರಿಗಳೊಂದಿಗೆ ಕೇಂದ್ರ ಚುನಾವಣಾ ಆಯೋಗ ಇಂದು ದೆಹಲಿಯಲ್ಲಿ ಸಮಾವೇಶ ನಡೆಸಲಿದೆ. ಈ ಸಮಾವೇಶದಲ್ಲಿ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ಮಾರ್ಗಗಳ ಕುರಿತು ಚರ್ಚಿಸಲಾಗುವುದು ಮತ್ತು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆ ಮತದಾನದ ಸಮಸ್ಯೆಯನ್ನು ಪರಿಹರಿಸಲು ಉದ್ದೇಶಿತ ಮತ್ತು ನಿರ್ದಿಷ್ಟ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಲಾಗುವುದು. ದೆಹಲಿ, ಮುಂಬೈ, ಚೆನ್ನೈ, ಬೆಂಗಳೂರು, ಹೈದರಾಬಾದ್, ಅಹಮದಾಬಾದ್, ಪುಣೆ, ಥಾಣೆ, ನಾಗ್ಪುರ, ಪಾಟ್ನಾ ಸಾಹಿಬ್, ಲಖನೌ ಮತ್ತು ಕಾನ್ಪುರ ನಗರ ಪಾಲಿಕೆಯ ಆಯುಕ್ತರು ಮತ್ತು ಬಿಹಾರ ಮತ್ತು ಉತ್ತರದ ಆಯ್ದ ಜಿಲ್ಲಾ ಚುನಾವಣಾ ಅಧಿಕಾರಿಗಳು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಮತ್ತು ಚುನಾವಣಾ ಆಯುಕ್ತರುಗಳಾದ ಜ್ಞಾನೇಶ್ ಕುಮಾರ್ ಮತ್ತು ಸುಖಬೀರ್ ಸಿಂಗ್ ಸಂಧು ಸಮಾವೇಶದ ಅಧ್ಯಕ್ಷತೆ ವಹಿಸಲಿದ್ದಾರೆ.

*****

ಲೋಕಸಭಾ ಚುನಾವಣೆಯ ಎರಡನೇ ಹಂತಕ್ಕೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಿನ್ನೆ ಸಂಜೆ ಮುಕ್ತಾಯಗೊಂಡಿದೆ. ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಕೆ.ಸಿ.ವೇಣುಗೋಪಾಲ್, ಹೇಮಮಾಲಿನಿ ಸೇರಿದಂತೆ ಪ್ರಮುಖ ಅಭ್ಯರ್ಥಿಗಳು ನಿನ್ನೆ ನಾಮಪತ್ರ ಸಲ್ಲಿಸಿದರು. ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಒಟ್ಟು ೮೯ ಲೋಕಸಭಾ ಸ್ಥಾನಗಳಿಗೆ ಈ ತಿಂಗಳ ೨೬ ರಂದು ಈ ಹಂತದಲ್ಲಿ ಮತದಾನ ನಡೆಯಲಿದೆ. ಉತ್ತರ ಪ್ರದೇಶದ ಮಥುರಾ ಲೋಕಸಭಾ ಕ್ಷೇತ್ರದಿಂದ ಹೇಮಾ ಮಾಲಿನಿ, ಕರ್ನಾಟಕದ ಮಂಡ್ಯದಿಂದ ಎಚ್.ಡಿ.ಕುಮಾರಸ್ವಾಮಿ, ತ್ರಿಶೂರ್ ನಿಂದ ನಟ-ರಾಜಕಾರಣಿ ಸುರೇಶ್ ಗೋಪಿ, ವಯನಾಡ್ ನಿಂದ ಕೆ.ಸುರೇಂದ್ರನ್ ಮತ್ತು ಕೇರಳದ ಅಲಪ್ಪುಳದಿಂದ ಕೆ.ಸಿ.ವೇಣುಗೋಪಾಲ್ ನಿನ್ನೆ ಉಮೇದುವಾರಿಕೆ ಸಲ್ಲಿಸಿದರು. ಜಮ್ಮು ಮತ್ತು ಕಾಶ್ಮೀರ ಹೊರತುಪಡಿಸಿ ೨ನೇ ಹಂತದ ನಾಮಪತ್ರ ಪರೀಶಿಲನೆ ಇಂದು ನಡೆಯಲಿದೆ.

*****

ಕರ್ನಾಟಕ ರಾಜ್ಯದಲ್ಲಿ ಇದೇ ೨೬ ರಂದು ೧೪ ಲೋಕಸಭಾ ಕ್ಷೇತ್ರಗಳಿಗೆ ನಡೆಯಲಿರುವ ಮೊದಲ ಹಂತದ ಚುನಾವಣೆಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ನಿನ್ನೆ ಅಂತ್ಯಗೊಂಡಿದ್ದು, ಇಲ್ಲಿಯರೆಗೆ ೩೫೮ ಅಭ್ಯರ್ಥಿಗಳು ೪೯೨ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಈ ಪೈಕಿ ೩೩೩ ಪುರುಷ ಅಭ್ಯರ್ಥಿಗಳು ಹಾಗೂ ೨೫ ಮಹಿಳಾ ಅಭ್ಯರ್ಥಿಗಳಿದ್ದಾರೆ. ಇಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಇದೇ ೮ ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

*****

ಲೋಕಸಭಾ ಚುನಾವಣೆಯ ಎರಡನೇ ಹಂತಕ್ಕೆ ಮಧ್ಯಪ್ರದೇಶದಲ್ಲಿ ೧೦೯ ಅಭ್ಯರ್ಥಿಗಳಿಂದ ಒಟ್ಟು ೧೫೭ ನಾಮಪತ್ರಗಳು ಸಲ್ಲಿಕೆಯಾಗಿವೆ. ಎರಡನೇ ಹಂತದಲ್ಲಿ ರಾಜ್ಯದ ೭ ಕ್ಷೇತ್ರಗಳಿಗೆ ಇದೇ ೨೬ರಂದು ಮತದಾನ ನಡೆಯಲಿದೆ.

*****

ರಾಷ್ಟ್ರಪತಿ ದ್ರೌಪದಿ ಮುರ್ಮು ಮುಂಬೈನ ಬಾಂಬೆ ಇಂಡಿಯನ್ ಇನ್ಸ್ಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯಲ್ಲಿ ನಿನ್ನೆ ಭಾರತದ ಮೊಟ್ಟ ಮೊದಲ ಸ್ವದೇಶಿ ವಂಶವಾಹಿ ಚಿಕಿತ್ಸಾ ಪದ್ಧತಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿಗಳು, ಸಿಎಆರ್-ಟಿ ಸೆಲ್ ಥೆರಪಿ ಸುಲಭವಾಗಿ ಪಡೆಯಲು ಹಾಗೂ ಅಗ್ಗದ ವೆಚ್ಚದಲ್ಲಿ ಲಭ್ಯವಾಗುವ ಮೂಲಕ ಇಡೀ ಮಾನವ ಕುಲಕ್ಕೆ ಹೊಸ ಭರವಸೆ ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಭಾರತದ ಮೊದಲ ವಂಶವಾಹಿ ಚಿಕಿತ್ಸೆ ಅಸಂಖ್ಯಾತ ರೋಗಿಗಳಿಗೆ ಹೊಸ ಜೀವನ ಕಲ್ಪಿಸುವಲ್ಲಿ ಸಫಲವಾಗಲಿದೆ ಎಂದು ನುಡಿದರು.

ಈ ಚಿಕಿತ್ಸೆ ಭಾರತವನ್ನು ಸುಧಾರಿತ ವೈದ್ಯಕೀಯ ಆರೈಕೆಯ ಜಾಗತಿಕ ನಕ್ಷೆಯಲ್ಲಿ ಹಾಗೂ ಅತ್ಯಾಧುನಿಕ ತಂತ್ರಜ್ಞಾನ ವೇದಿಕೆಗೆ ಪ್ರವೇಶ ಪಡೆದಿರುವ ಉನ್ನತ ದೇಶಗಳ ಸಾಲಿಗೆ ಸೇರ್ಪಡೆಗೊಳಿಸಲಿದೆ ಎಂದು ಹೇಳಿದರು.

*****

ಮುಂಬರುವ ಲೋಕಸಭಾ ಚುನಾವಣೆಗೆ ಪಕ್ಷದ ಪ್ರಣಾಳಿಕೆಯನ್ನು ಅಂತಿಮಗೊಳಿಸುವ ನಿಟ್ಟಿನಲ್ಲಿ ಬಿಜೆಪಿಯ ಚುನಾವಣಾ ಪ್ರಣಾಳಿಕೆ ಸಮಿತಿ ಸಭೆ ದೆಹಲಿಯ  ಪಕ್ಷದ ಪ್ರಧಾನ ಕಚೇರಿಯಲ್ಲಿ ನಿನ್ನೆ ನಡೆಯಿತು. ಬಿಜೆಪಿ ಹಿರಿಯ ನಾಯಕ ರಾಜನಾಥ್ ಸಿಂಗ್ ನೇತೃತ್ವದ ೨೭ ಸದಸ್ಯರ ಸಮಿತಿಯ ಎರಡನೇ ಸಭೆ ಇದಾಗಿದೆ. ಪಕ್ಷದ ಹಿರಿಯ ನಾಯಕರಾದ ನಿರ್ಮಲಾ ಸೀತಾರಾಮನ್, ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು ಮತ್ತು ಇತರರು ಸಭೆಯಲ್ಲಿ ಭಾಗವಹಿಸಿದ್ದರು. ಏತನ್ಮಧ್ಯೆ, ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ತನ್ನ ಪ್ರಣಾಳಿಕೆಯನ್ನು ಇಂದು ಬಿಡುಗಡೆ ಮಾಡಲಿದೆ.

*****

ಪಶ್ಚಿಮ ಬಂಗಾಳದಲ್ಲಿ ಕೇಂದ್ರ ಯೋಜನೆಗಳ ಅನುಷ್ಠಾನಕ್ಕೆ ಅವಕಾಶ ನೀಡದ ತೃಣಮೂಲ ಕಾಂಗ್ರೆಸ್ ಸರ್ಕಾರವನ್ನು ಪ್ರಧಾನಿ ಮತ್ತು ಹಿರಿಯ ಬಿಜೆಪಿ ನಾಯಕ ನರೇಂದ್ರ ಮೋದಿ ಟೀಕಿಸಿದ್ದಾರೆ. ನಿನ್ನೆ ಕೂಚ್ ಬೆಹಾರ್ ನಲ್ಲಿ ನಡೆದ ರಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ದಾಖಲೆಯ ಹಣವನ್ನು ನೀಡಿದ್ದರೂ ಅನೇಕ ಯೋಜನೆಗಳು ಸಮಯಕ್ಕೆ ಸರಿಯಾಗಿ ಪೂರ್ಣಗೊಂಡಿಲ್ಲ ಎಂದು ದೂಷಿಸಿದ್ದಾರೆ. ಏತನ್ಮಧ್ಯೆ, ಕೂಚ್ ಬಿಹಾರ್ ನ ಮಾತಭಂಗದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ, ರಾಜ್ಯದಲ್ಲಿ ಸಿಎಎಯನ್ನು ಜಾರಿಗೆ ತರುವುದಿಲ್ಲ ಎಂದು ಹೇಳಿದರು. ಜಲ್ಪೈಗುರಿಯ ಮಾಲ್ ನಲ್ಲಿ ನಡೆದ ಸಭೆಯಲ್ಲಿಯೂ ಮಮತಾ ಬ್ಯಾನರ್ಜಿ ಅವರು ಭಾಗವಹಿಸಿದ್ದರು. ಉತ್ತರ ಬಂಗಾಳದ ಕೂಚ್ ಬೆಹಾರ್, ಅಲಿಪುರ್ದುವಾರ್ ಮತ್ತು ಜಲ್ಪೈಗುರಿ ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಏಪ್ರಿಲ್ ೧೯ ರಂದು ಮತದಾನ ನಡೆಯಲಿದೆ.

*****

ಇಂದು ಹಸಿರು ಕ್ರಾಂತಿಯ ಹರಿಕಾರ ಹಾಗೂ ಹಿಂದುಳಿದ ಜನರ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ ೧೧೭ನೇ ಜನ್ಮ ಜಯಂತಿ. ಇದರ ಅಂಗವಾಗಿ ದೇಶಾದ್ಯಂತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.  ಬೆಂಗಳೂರಿನ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಲಿದ್ದಾರೆ.

*****

ಭಾರತೀಯ ಕೋಸ್ಟ್ ಗಾರ್ಡ್ - ಐಸಿಜಿ ಮಾಲಿನ್ಯ ನಿಯಂತ್ರಣ ಹಡಗು ಸಮುದ್ರ ಪಹೇದಾರ್, ವಿಯೆಟ್ನಾಂನ ಹೋ ಚಿ ಮಿನ್ಹ್ ನಲ್ಲಿ ವಿಯೆಟ್ನಾಂ ಕೋಸ್ಟ್ ಗಾರ್ಡ್ ನೊಂದಿಗೆ ಸಾಗರ ತೈಲ ಮಾಲಿನ್ಯ ಪ್ರತಿಕ್ರಿಯೆಯ ಜಂಟಿ ತಾಲೀಮನ್ನು ನಡೆಸಿದೆ. ತರಬೇತಿಯ ಸಮಯದಲ್ಲಿ, ಹಡಗಿನ ಮಾಲಿನ್ಯ ಪ್ರತಿಕ್ರಿಯೆ ಸಾಧನಗಳ ಪ್ರದರ್ಶನವನ್ನು ನಡೆಸಲಾಯಿತು. ಇದು ಆಸಿಯಾನ್ ಪ್ರದೇಶದಲ್ಲಿ ಸಮುದ್ರ ಮಾಲಿನ್ಯದ ಹಂಚಿಕೆಯ ಪ್ರತಿಕ್ರಿಯೆಗಾಗಿ ಭಾರತೀಯ ಕರಾವಳಿ ಕಾವಲು ಪಡೆಯ ಸಂಕಲ್ಪವನ್ನು ತೋರಿಸುತ್ತದೆ ಎಂದು ಐಸಿಜಿ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ತಿಳಿಸಿದೆ. ಸುರಕ್ಷಿತ, ಸುಭದ್ರ ಮತ್ತು ಸ್ವಚ್ಛ ಸಮುದ್ರಗಳಿಗೆ ಐಸಿಜಿ ತನ್ನ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ಅದು ಹೇಳಿದೆ.

*****

ಚೆನ್ನೈ ಸಮುದ್ರ ತೀರದಿಂದ ೬೫ ನಾಟಿಕಲ್ ಮೈಲು ದೂರದ ಸಮುದ್ರದಲ್ಲಿ ಎಂಟು ಮೀನುಗಾರರನ್ನು ಭಾರತೀಯ ಕರಾವಳಿ ಕಾವಲು ಪಡೆ ರಕ್ಷಣೆ ಮಾಡಿದೆ. ರಕ್ಷಣಾ ಕಾರ್ಯಾಚರಣೆಯಲ್ಲಿ, ಮೀನುಗಾರಿಕಾ ದೋಣಿಯಲ್ಲಿದ್ದ ೧೦ ಜನರಲ್ಲಿ ಎಂಟು ಮಂದಿಯನ್ನು ಕಾರ್ಯಾಚರಣೆಯ ಮೂಲಕ ಜೀವಂತವಾಗಿ ರಕ್ಷಿಸಲಾಗಿದೆ. ಚಿಂತಾಜನಕ ಸ್ಥಿತಿಯಲ್ಲಿದ್ದ ಒಬ್ಬ ಮೀನುಗಾರರನ್ನು ರಕ್ಷಿಸಲು ಸಾಧ್ಯವಾಗಲಿಲ್ಲ. ನಾಪತ್ತೆಯಾಗಿರುವ ಮೀನುಗಾರರಿಗಾಗಿ ಶೋಧ ನಡೆಸಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

*****

ಉದ್ಯೋಗಕ್ಕಾಗಿ ಕಾಂಬೋಡಿಯಾಕ್ಕೆ ಪ್ರಯಾಣಿಸುವ ಭಾರತೀಯ ಪ್ರಜೆಗಳು, ಅಧಿಕೃತ ಏಜೆಂಟರ ಮೂಲಕ ಮಾತ್ರ ಪ್ರಯಾಣಿಸುವಂತೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸಲಹೆ ನೀಡಿದೆ.

ಕಾಂಬೋಡಿಯಾದಲ್ಲಿ ಲಾಭದಾಯಕ ಉದ್ಯೋಗಾವಕಾಶಗಳ ನಕಲಿ ಭರವಸೆಗಳಿಂದ ಆಮಿಷಕ್ಕೆ ಒಳಗಾಗುತ್ತಿರುವ ಭಾರತೀಯ ಪ್ರಜೆಗಳು ಮಾನವ ಕಳ್ಳಸಾಗಣೆದಾರರ ಬಲೆಗೆ ಬೀಳುತ್ತಿದ್ದಾರೆ ಎಂದು ಸಚಿವಾಲಯ ಎಚ್ಚರಿಸಿದೆ. ಉದ್ಯೋಗಕ್ಕಾಗಿ ಪ್ರಯಾಣಿಸುವ ಮುನ್ನ ಉದ್ಯೋಗದಾತರ ಹಿನ್ನೆಲೆಯನ್ನು ಸಂಪೂರ್ಣವಾಗಿ ಪರಿಶೀಲಿಸುವಂತೆ ಸಚಿವಾಲಯವು ಜನರಿಗೆ ಸಲಹೆ ನೀಡಿದೆ. ಈ ರೀತಿಯ ಸಮಸ್ಯೆಯನ್ನು ಪರಿಹರಿಸಲು ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಕಾಂಬೋಡಿಯನ್ ಅಧಿಕಾರಿಗಳೊಂದಿಗೆ ನಿಕಟವಾಗಿ ಕೆಲಸ ಮಾಡುತ್ತಿದೆ ಮತ್ತು ಸಂತ್ರಸ್ತ ಭಾರತೀಯ ಪ್ರಜೆಗಳಿಗೆ ನಿರಂತರ ಸಹಾಯವನ್ನು ಒದಗಿಸಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ.

*****

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ ೩ ವಿಕೆಟ್‌ಗಳಿಂದ ಗುಜರಾತ್ ಟೈಟನ್ಸ್ ತಂಡವನ್ನು ಸೋಲಿಸಿದೆ. ಇದರೊಂದಿಗೆ ಸತತ ಎರಡು ಸೋಲುಗಳಿಂದ ಹೊರಬಂದ ಪಂಜಾಬ್, ಸದ್ಯ ನಾಲ್ಕು ಅಂಕಗಳನ್ನು ಹೊಂದಿದೆ. ೨೦೦ ರನ್ ಗುರಿ ಬೆನ್ನಟ್ಟಿದ ಪಂಜಾಬ್ ೧ ಎಸೆತ ಬಾಕಿ ಇರುವಂತೆಯೇ ೭ ವಿಕೆಟ್ ನಷ್ಟಕ್ಕೆ ಗುರಿ ಮುಟ್ಟಿತು. ಶಶಾಂಕ್ ಸಿಂಗ್ ಅಜೇಯ ೬೧ ರನ್ ಗಳಿಸಿ ಗೆಲುವಿನ ರೂವಾರಿಯೆನಿಸಿದರು. ಇದಕ್ಕೂ ಮುನ್ನ ಶುಬ್ಮನ್ ಗಿಲ್ ಅಜೇಯ ೮೯ ರನ್ ಗಳಿಸಿದ ಪರಿಣಾಮ ಗುಜರಾತ್ ತಂಡ ೨೦ ಓವರ್ ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೯೯ ರನ್ ಕಲೆಹಾಕಿತು.

ಹೈದರಾಬಾದ್ ನಲ್ಲಿ ಇಂದು ರಾತ್ರಿ ೭.೩೦ಕ್ಕೆ ಆರಂಭವಾಗಲಿರುವ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ.

*****

ಕ್ರೊಯೇಷಿಯಾದಲ್ಲಿ ನಡೆದ Wಖಿಖಿ ಫೀಡರ್ ವರಾಜ್‌ದಿನ್ ಟೇಬಲ್ ಟೆನಿಸ್ ಟೂರ್ನಿಯಲ್ಲಿ ಭಾರತದ ನಾಲ್ವರು ಆಟಗಾರರು ಎರಡನೇ ಸುತ್ತಿಗೆ ಪ್ರವೇಶಿಸಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ ಜಿ. ಸತಿಯನ್ ಜರ್ಮನಿಯ ಫೆಲಿಕ್ಸ್ ವೆಟ್ಜೆಲ್ ಅವರನ್ನು ೩-೧ರಿಂದ ಸೋಲಿಸಿದರೆ, ಸ್ನೇಹಿತ್ ಸುರವಜ್ಜುಲ, ಕಜಕಿಸ್ತಾನ್‌ನದ ಸಂಝುರ್ ಝುಬಾನೊವ್ ಅವರನ್ನು ೬೪ರ ಸುತ್ತಿನಲ್ಲಿ ೩-೦ ಅಂತರದಿಂದ ಸೋಲಿಸಿದರು. ಮಹಿಳೆಯರ ಸಿಂಗಲ್ಸ್‌ನ ೬೪ನೇ ಸುತ್ತಿನಲ್ಲಿ ಭಾರತದ ಯಶಸ್ವಿನಿ ಘೋರ್ಪಡೆ, ಕ್ರೊಯೇಷಿಯಾದ ಮತೇಜಾ ಜೆಗರ್ ವಿರುದ್ಧ ೩-೦ ಅಂತರದಲ್ಲಿ ಗೆದ್ದಯಮ ಮುಂದಿನ ಸುತ್ತಿಗೆ ಪ್ರವೇಶಿಸಿದ್ದಾರೆ.

******